ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ಮಾಗಡಿ ತಾಲ್ಲೂಕಿಗೆ ಹೇಮಾವತಿ ನಾಲೆಯಿಂದ ನೀರು ಹರಿಸುವ ಬಗ್ಗೆ

ಶ್ರೀ ಅ. ದೇವೇಗೌಡ(ಪದವೀಧರರ ಕ್ಷೇತ್ರ) -

445 (655) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಮಾಗಡಿ ತಾಲ್ಲೂಕು, ರಾಮನಗರ ಜಿಲ್ಲೆ, ಈ ತಾಲ್ಲೂಕಿಗೆ ಹೇಮಾವತಿ ನದಿಯಿಂದ ನಾಲೆಯ ಮೂಲಕ ಕೆರೆಗಳಿಗೆ ನೀರನ್ನು ಹರಿಸುವ ಕಾಮಗಾರಿಯು ಪ್ರಸ್ತುತ ಯಾವ ಹಂತದಲ್ಲಿದೆ;

(ಆ) 2014ರಲ್ಲಿ ಪ್ರಾರಂಭವಾದ ಈ ಕಾಮಗಾರಿಯು ಪೂರ್ಣಗೊಳ್ಳಲು ವಿಳಂಬವಾಗುತ್ತಿದ್ದು, ಕಾಮಗಾರಿಯು ತ್ವರಿತವಾಗಿ ಪೂರ್ಣಗೊಳ್ಳಲು ಸರ್ಕಾರ ಏನು ಕ್ರಮ ಕೈಗೊಂಡಿದೆ;

(ಇ) ಮಾಗಡಿ ತಾಲ್ಲೂಕಿನ ಕೆರೆಗಳಿಗೆ ನೀರಿನ ಬವಣೆ ಹೆಚ್ಚಾಗಿದ್ದು, ಹೇಮಾವತಿ ನದಿಯಿಂದ ನಾಲೆಯ ಮೂಲಕ ಹರಿಸುವ ಕುಡಿಯುವ ನೀರು ಕಾಮಗಾರಿಯು ಪೂರ್ಣಗೊಳ್ಳಲು ಎಷ್ಟು ಕಾಲಾವಧಿ ಬೇಕಾಗಬಹುದು?